**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ**
**ಸಿ.ಸಿ. 55/2010**

| | | |
|---|---|---|
| ಹೆಸರು | ಮುನಿಶಾಮಪ್ಪ | ಪ್ರಾ.ಸಾ.8 |
| ಸಾ.ಪ್ರ.ವ.ಬೋ | | ದಿ: 16.03.2021 |

**ಪಾಟಿ ಸವಾಲು: ಆರೋಪಿ ಪರ ವಕೀಲರಿಂದ : –**

ನಾನು ವ್ಯವಸಾಯ ಮಾಡುತ್ತೇನೆ. ನಿ.ಪಿ.3ಕ್ಕೆ ಸಹಿ ಮಾಡುವ ಸಂದರ್ಭದಲ್ಲಿ ನಾನು ಮುದ್ದನಹಳ್ಳಿ ಗ್ರಾಮದಲ್ಲಿ ವಾಸವಾಗಿದ್ದೆ. ನಿ.ಪಿ.3ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿಲ್ಲ. ನಿ.ಪಿ.3ಕ್ಕೆ ಕೊಂಡ್ರಹಳ್ಳಿ ಗೇಟ್ ಬಳಿ ಸಹಿ ಮಾಡಿದ್ದೆ. ಆ ಸಮಯದಲ್ಲಿ ನಾನು ನಂದಗುಡಿಯಿಂದ ಊರಿಗೆ ಬರುತ್ತಿದ್ದೆ. ಆ ಸಮಯದಲ್ಲಿ ಸುಮಾರು ಎಷ್ಟು ಜನ ಇದ್ದರು ಎಂದು ನನಗೆ ಗೊತ್ತಿಲ್ಲ. ನಿ.ಪಿ.3ರ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆ ಮೇರೆಗೆ ನಿ.ಪಿ.3ಕ್ಕೆ ಸಹಿ ಮಾಡಿರುತ್ತೇನೆ. ಆರೋಪಿಯನ್ನು ನಾನು ಸ್ಥಳದಲ್ಲಿ ನೋಡಿಲ್ಲ. ಆರೋಪಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)**
**ಓ.ಹೇ.ಕೇ.ಸ.ಇದೆ**

**ಸಿವಿಲ್ ನ್ಯಾಯಾಧೀಶರು, ಹೊಸಕೋಟೆ.**

**<u>ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ</u>**
**<u>ಸಿ.ಸಿ. 55/2010</u>**

| | | |
|---|---|---|
| ಹೆಸರು | ದೇವರಾಜ | ಪ್ರಾ.ಸಾ.7 |
| ಸಾ.ಪ್ರ.ವ.ಬೋ | | ದಿ: 16.03.2021 |

**<u>ಪಾಟಿ ಸವಾಲು: ಆರೋಪಿ ಪರ ವಕೀಲರಿಂದ : –</u>**

ನಾನು ವ್ಯವಸಾಯ ಮಾಡುತ್ತೇನೆ. ನಿ.ಪಿ.3ಕ್ಕೆ ಸಹಿ ಮಾಡುವ ಸಂದರ್ಭದಲ್ಲಿ ನಾನು ಮುದ್ದನಹಳ್ಳಿ ಗ್ರಾಮದಲ್ಲಿ ವಾಸವಾಗಿದ್ದೆ. ನಿ.ಪಿ.3ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿಲ್ಲ. ನಿ.ಪಿ.3ರ ಸಮಯದಲ್ಲಿ ಆಟೋವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಕೆಎ–07–7364 ಅದರ ನೋಂದಣಿ ಸಂಖ್ಯೆಯಾಗಿದ್ದು, ಕಪ್ಪು ಬಣ್ಣದ್ದಾಗಿರುತ್ತದೆ. ಆ ಸಮಯದಲ್ಲಿ ಸುಮಾರು ಎಷ್ಟು ಜನ ಇದ್ದರು ಎಂದು ನಾನು ಲೆಕ್ಕ ಮಾಡಿರುವುದಿಲ್ಲ. ಆ ಸಮಯದಲ್ಲಿ ಸ್ಥಳದಲ್ಲಿ ಇಬ್ಬರು ಪೊಲೀಸರು ಹಾಜರು ಇದ್ದರು. ಅವರ ಹೆಸರು ನನಗೆ ಗೊತ್ತಿಲ್ಲ. ಆರೋಪಿಯನ್ನು ನಾನು ಸ್ಥಳದಲ್ಲಿ ನೋಡಿಲ್ಲ. ನಿ.ಪಿ.3ನ್ನು ತಯಾರಿಸಿದ ಸ್ಥಳದ ಚೆಕ್ಕುಬಂದಿ ನಾನು ಹೇಳಲಾಗುವುದಿಲ್ಲ. ಪೊಲೀಸರು ನನಗೆ ಯಾವುದೇ ನೋಟಿಸ್ ನೀಡಿರುವುದಿಲ್ಲ. ಆದರೆ ಪೊಲೀಸರು ನನಗೆ ಕರೆ ಮಾಡಿರುತ್ತಾರೆ. ಅದರ ಸಮಯ ನನಗೆ ಗೊತ್ತಿಲ್ಲ. ನಿ.ಪಿ.3ರ ಸಮಯದಲ್ಲಿ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ನಿ.ಪಿ.3ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಪಿರ್ಯಾದುದಾರರಿಗೆ ಪರಿಹಾರ ಸಿಗಲೆಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)**
**ಓ.ಹೇ.ಕೇ.ಸ.ಇದೆ**

**ಸಿವಿಲ್ ನ್ಯಾಯಾಧೀಶರು, ಹೊಸಕೋಟೆ.**